**Bangalore**
**Regional News**
**01.07.2026 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಇಂದಿನಿಂದ 'ವಿಕಸಿತ ಭಾರತ ಜಿ ರಾಮ್ ಜಿ' ಅಧಿಕೃತ ಜಾರಿ ; ರಾಜ್ಯದಲ್ಲಿ ಕಾರ್ಮಿಕರಿಗೆ ೪೦೯ ರೂಪಾಯಿವರೆಗೆ ದಿನಗೂಲಿ ನಿಗದಿ
2. ಮೆಟ್ರೋ ವ್ಯತ್ಯಯದ ಬಗ್ಗೆ ಸಂಸದ ತೇಜಸ್ವಿ ಸೂರ್ಯ ದೂರು ; ಕೇಂದ್ರ ಸರ್ಕಾರದಿಂದ ತನಿಖೆಗೆ ಆದೇಶ
3. ವಿಜಯಪುರದಲ್ಲಿ ರೈಲ್ವೆ ಕೋಚ್ ಡಿಪೋ ಸ್ಥಾಪಿಸುವಂತೆ ಕೇಂದ್ರ ರೈಲ್ವೆ ಸಚಿವರಿಗೆ ಸಚಿವ ಎಂ.ಬಿ.ಪಾಟೀಲ್ ಪತ್ರ
4. ಮಂಗಳೂರಿನ ನಾಗೋರಿ ಬಳಿ ಕಂಪೌಂಡ್ ಕುಸಿತ ; ಇಬ್ಬರು ಮಕ್ಕಳು ಸೇರಿ ಮೂವರು ಸಾವು
5. ಬೆಂಗಳೂರಿನಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆ ; ಬೀದಿಬದಿ ವ್ಯಾಪಾರಿಗಳಿಂದ ಆಕ್ರೋಶ

<><><><>

ಇಂದಿನಿಂದ ವಿಕಸಿತ ಭಾರತ ಉದ್ಯೋಗ ಖಾತ್ರಿ ಯೋಜನೆಯಾದ ವಿಕಸಿತ ಭಾರತ ಜಿ ರಾಮ್ ಜಿ ಜಾರಿಗೆ ಬಂದಿದೆ. ಕಳೆದ ೨೦ ವರ್ಷಗಳಿಂದ ಅಸ್ತಿತ್ವದಲ್ಲಿದ್ದ ಮನ್ರೇಗಾ ಯೋಜನೆ ಮುಕ್ತಾಯಗೊಂಡಿದೆ. ವಿಕಸಿತ ಭಾರತ ಜಿ ರಾಮ್ ಜಿ ಯಲ್ಲಿ ಉದ್ಯೋಗದ ಅವಧಿಯನ್ನು ವಾರ್ಷಿಕ ನೂರು ದಿನದಿಂದ ೧೨೫ ದಿನಗಳಿಗೆ ಹೆಚ್ಚಿಸಲಾಗಿದೆ. ಗ್ರಾಮ ಯೋಜನೆಗಳಿಗೆ ಆದ್ಯತೆ ನೀಡಲಾಗಿದೆ. ಯೋಜನೆಗಳನ್ನು ಗುರುತಿಸಲು ಮತ್ತು ಅವುಗಳ ಮೇಲ್ವಿಚಾರಣೆ ನಡೆಸಲು ಉಪಗ್ರಹ ಚಿತ್ರಗಳು ಜಿಐಎಸ್ ಮ್ಯಾಪಿಂಗ್ ಮತ್ತು ಡಿಜಿಟಲ್ ಪರಿಕರಣಗಳನ್ನು ಬಳಸಲಾಗುತ್ತಿದೆ. ಈ ನಡುವೆ ಕೇಂದ್ರ ಸರ್ಕಾರ ಪರಿಷ್ಕೃತ ದಿನಗೂಲಿ ದರಗಳನ್ನು ಪ್ರಕಟಿಸಿದೆ. ರಾಜ್ಯದಲ್ಲಿ ೩೭೦ ರೂಪಾಯಿಗಿಂತ ಹೆಚ್ಚಿನ ದಿನಗೂಲಿ ಹೊಂದಿದ್ದು, ಕಾರ್ಮಿಕರಿಗೆ ೪೦೯ ರೂಪಾಯಿವರೆಗೆ ದಿನಗೂಲಿ ದೊರೆಯಲಿದೆ. ಈ ಮೂಲಕ ಲಕ್ಷಾಂತರ ಗ್ರಾಮೀಣಾ ಕಾರ್ಮಿಕರ ಜೀವನೋಪಾಯಗಳನ್ನು ಬಲಪಡಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

<><><><>

ಕಳೆದ ಮೂರು ವರ್ಷದಲ್ಲಿ ಬೆಂಗಳೂರಿನ ಮೆಟ್ರೋ ರೈಲು ಸೇವೆಯಲ್ಲಿನ ಅಡಚಣೆಗಳ ಬಗ್ಗೆ ತನಿಖೆ ನಡೆಸಲು ಹಾಗೂ ತೆಗೆದುಕೊಂಡ ಕ್ರಮಗಳ ಕುರಿತು ವರದಿ ಸಲ್ಲಿಸಲು ರೈಲು ಸುರಕ್ಷತಾ ಮುಖ್ಯ ಆಯುಕ್ತರು ಬೆಂಗಳೂರು ಮೆಟ್ರೋ ರೈಲು ನಿಗಮ ಲಿಮಿಟೆಡ್‌ಗೆ ನಿರ್ದೇಶನ ನೀಡಿದ್ದಾರೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಮೆಟ್ರೋದಲ್ಲಿ ಉಂಟಾಗುತ್ತಿರುವ ವಿವಿಧ ಸಮಸ್ಯೆಗಳ ಬಗ್ಗೆ ದಾಖಲೆ ಸಮೇತ ನೀಡಿದ್ದ ದೂರಿನ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಈ ಮಹತ್ವದ ಆದೇಶ ನೀಡಿದೆ. ಪ್ರಯಾಣಿಕರ ಸುರಕ್ಷತೆ ಮತ್ತು ಸೌಕರ್ಯ ಬಿಎಂಆರ್‌ಸಿಎಲ್‌ನ ಮೊದಲ ಆದ್ಯತೆಯಾಗಬೇಕು. ರಾಜ್ಯ ಸರ್ಕಾರವು ಈ ಸಮಸ್ಯೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು ಎಂದು ಸಂಸದ ತೇಜಸ್ವಿ ಸೂರ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ೨೦೨೪ರಿಂದ ಈವರೆಗೆ ಮೆಟ್ರೋ ಸೇವೆಯಲ್ಲಿ ೨೦ಕ್ಕೂ ಹೆಚ್ಚು ಬಾರಿ ದೊಡ್ಡ ಮಟ್ಟದ ವ್ಯತ್ಯಯಗಳು ವರದಿಯಾಗಿವೆ. ಬಿಎಂಆರ್‌ಸಿಎಲ್ ಈ ವೈಫಲ್ಯಗಳನ್ನು ತಕ್ಷಣವೇ ಸರಿಪಡಿಸುವ ಮೂಲಕ ಪ್ರಯಾಣಿಕರಲ್ಲಿ ಮತ್ತೆ ವಿಶ್ವಾಸ ಮೂಡಿಸಬೇಕು ಎಂದು ಒತ್ತಾಯಿಸಿದ್ದಾರೆ.

<><><><>

ವಿಜಯಪುರ ಜಿಲ್ಲಾ ಕೇಂದ್ರದಲ್ಲಿ ರೈಲ್ವೆ ಸಂಪರ್ಕ ಬಲವರ್ಧನೆಗಾಗಿ ಕೋಚ್ ಡಿಪೋ ಸ್ಥಾಪಿಸಬೇಕು ಮತ್ತು ರೈಲು ನಿಲ್ದಾಣದಲ್ಲಿ ಇನ್ನೊಂದು ಆಗಮನ ಮತ್ತು ನಿರ್ಗಮನ ದ್ವಾರವನ್ನು ಅಭಿವೃದ್ಧಿ ಪಡಿಸಬೇಕೆಂದು ಕೋರಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣನವರ ಜತೆ ಚರ್ಚಿಸಲಾಗಿದೆ. ಈ ಸಂಬಂಧವಾಗಿ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ಅವರಿಗೂ ಪತ್ರ ಬರೆಯಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಈ ಹಿಂದೆ ವಿಜಯಪುರ ರೈಲು ನಿಲ್ದಾಣದ ಆವರಣದಲ್ಲೇ ಇದ್ದ ಗೂಡ್ಸ್ ಶೆಡ್ಡನ್ನು ಈಗ ಅಲಿಯಾಬಾದಿಗೆ ಸ್ಥಳಾಂತರಿಸಲಾಗಿದೆ. ಹೀಗಾಗಿ ಕೋಚ್ ಡಿಪೋ ಸ್ಥಾಪನೆಗೆ ಜಾಗದ ಕೊರತೆಯೇನೂ ಇಲ್ಲ ಎಂದು ಹೇಳಿದ್ದಾರೆ. ವಿಜಯಪುರ ಚಾರಿತ್ರಿಕ ಸ್ಥಳವಾಗಿದ್ದು, ವರ್ಷವಿಡೀ ಲಕ್ಷಾಂತರ ಪ್ರವಾಸಿಗರನ್ನು ಸೆಳೆಯುತ್ತಿರುವ ಪ್ರವಾಸೋದ್ಯಮ ತಾಣವಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರ ರೈಲು ನಿಲ್ದಾಣದಲ್ಲಿ ಹೆಚ್ಚುವರಿಯಾಗಿ ಇನ್ನೊಂದು ಆಗಮನ-ನಿರ್ಗಮನ ದ್ವಾರವನ್ನು ಸ್ಥಾಪಿಸಬೇಕು ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

<><><><>

ದಕ್ಷಿಣಕನ್ನಡ ಜಿಲ್ಲೆಯಲ್ಲಿ ಸುರಿದ ಧಾರಾಕಾರ ಮಳೆಯಿಂದ ಮಂಗಳೂರಿನ ನಾಗೋರಿ ಬಳಿ ಕಂಪೌಂಡ್ ಕುಸಿದು ಮನೆಗಳ ಮೇಲೆ ಬಿದ್ದ ಪರಿಣಾಮ ಮೂವರು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಮೂವರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ದುರಂತ ಸಂಭವಿಸುತ್ತಿದ್ದಂತೆ ರಕ್ಷಣಾ ತಂಡಗಳು ಧಾವಿಸಿ ಕಾರ್ಯಾಚರಣೆ ನಡೆಸಿ ಆವಷೇಶಗಳಡಿ ಸಿಲುಕಿದ್ದವರಲ್ಲಿ ಮೂವರನ್ನು ಹೊರ

ತೆಗೆದಿದ್ದಾರೆ. ಘಟನೆ ಹಿನ್ನೆಲೆಯಲ್ಲಿ ದೆಹಲಿ ಪ್ರವಾಸದಲ್ಲಿರುವ ಆರೋಗ್ಯ ಸಚಿವ ಯು.ಟಿ.ಖಾದರ್ ತಮ್ಮ ಭೇಟಿಯನ್ನು ಮೊಟಕುಗೊಳಿಸಿದ್ದಾರೆ. ತ್ವರಿತ ಪರಿಹಾರ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗೆ ಸೂಚಿಸಿದ್ದಾರೆ. ಗಾಯಾಳುಗಳಿಗೆ ಸರ್ಕಾರದ ವತಿಯಿಂದಲೇ ಆಸ್ಪತ್ರೆಯಲ್ಲಿ ಚಿಕಿತ್ಸಾ ವೆಚ್ಚ ಭರಿಸಲು ಹಾಗೂ ಮೃತರ ಕುಟುಂಬದವರಿಗೆ ಇಂದೇ ಪರಿಹಾರ ಮೊತ್ತ ನೀಡಲು ನಿರ್ದೇಶನ ನೀಡಿದ್ದಾರೆ. ಈ ದುರಂತಕ್ಕೆ ಸಂಬಂಧಿಸಿದಂತೆ ಕಂದಾಯ ಸಚಿವ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹಾಗೂ ಮಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ್ ಸಂತಾಪ ಸೂಚಿಸಿದ್ದಾರೆ.

<><><><>

ಗ್ರೇಟರ್ ಬೆಂಗಳೂರಿನ ಐದು ನಗರ ಪಾಲಿಕೆ ವ್ಯಾಪ್ತಿಯಲ್ಲಿ ವಲಯ ಆಯುಕ್ತರ ನೇತೃತ್ವದಲ್ಲಿ ಇಂದು ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಯುತ್ತಿದೆ. ನಗರದ ಎಲ್ಲಾ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ಚುರುಕುಗೊಂಡಿದ್ದು, ಜೆಸಿಬಿ ಮತ್ತು ಟ್ರ್ಯಾಕ್ಟರ್‌ಗಳ ಮೂಲಕ ಒತ್ತುವರಿ ತೆರವು ಮಾಡಲಾಗುತ್ತದೆ. ಚಾಮರಾಜಪೇಟೆಯ ೫ನೇ ಮುಖ್ಯರಸ್ತೆಯಲ್ಲಿ ಕೇಂದ್ರ ಪಾಲಿಕೆ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ದಕ್ಷಿಣನಗರ ಪಾಲಿಕೆಯ ಜಯನಗರ ವಲಯದಲ್ಲಿ, ಚಿಕ್ಕಪೇಟೆ, ಬಸವನಗುಡಿ, ಮಾರತ್‌ಹಳ್ಳಿ, ಕೆ.ಆರ್.ಪುರಂನಲ್ಲಿಯೂ ಕಾರ್ಯಾಚರಣೆ ಮುಂದುವರೆದಿದೆ. ಪಾದಚಾರಿ ಮಾರ್ಗದಲ್ಲಿ ಯಾವುದೇ ರೀತಿಯ ಕಟ್ಟಡ ಸಾಮಗ್ರಿಗಳನ್ನು ಅಥವಾ ಅಂಗಡಿಗಳನ್ನು ಇಡುವಂತಿಲ್ಲ ಎಂದು ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ. ಈ ಕಾರ್ಯಾಚರಣೆಯಿಂದ ಬೀದಿಬದಿ ವ್ಯಾಪಾರಿಗಳು ಅಸಮಾಧಾನಗೊಂಡಿದ್ದಾರೆ. ಪಾದಾಚಾರಿಗಳಿಗೆ ತೊಂದರೆಯಾಗದಂತೆ ವ್ಯಾಪಾರ ಮಾಡಲು ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ.

<><><><>

ಎಸ್‌ಐಆರ್ ಕುರಿತು ದೇಶಾದ್ಯಂತ ವಿವಿಧ ಚರ್ಚೆಗಳು ನಡೆದಿದ್ದು, ಅದರ ಸಾಧಕ-ಬಾಧಕಗಳ ಕುರಿತಾಗಿ ಈಗಾಗಲೇ ಚರ್ಚಿಸಲಾಗಿದೆ. ರಾಜ್ಯದಲ್ಲಿ ಮತದಾರರ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ಬಾರಿ ಮಳೆಯ ಪ್ರಮಾಣ ಕಡಿಮೆಯಾಗಿದ್ದು, ದೇಶದಲ್ಲೇ ಸುಮಾರು ಶೇಕಡ ೭೫ರಷ್ಟು ಭಾಗದಲ್ಲಿ ಬರ ಸೃಷ್ಟಿಯಾಗಿದೆ. ರಾಜ್ಯದಲ್ಲಿ ನೀರಿನ ಕೊರತೆ ಎದುರಿಸಬಹುದಾದ ಏಳು ಜಿಲ್ಲೆಗಳ ಜಿಲ್ಲಾಧಿಕಾರಿಗಳ ಜೊತೆಗೆ ಸಭೆ ನಡೆಸಿ, ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಎಚ್ಚರ ವಹಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿರುವುದಾಗಿ ಹೇಳಿದ್ದಾರೆ.

<><><><>

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಇಂದು ಬೆಂಗಳೂರಿನ ಸಿಟಿ ಸಿವಿಲ್ ಕೋರ್ಟ್‌ಗೆ ಭೇಟಿ ನೀಡಿ ವಕೀಲರ ಭವನದ ಆವರಣದ ಹಲವು ಅಭಿವೃದ್ಧಿ ಕಾರ್ಯಗಳು ಹಾಗೂ ಕಾಮಗಾರಿಗಳನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಬೆಂಗಳೂರು ವಕೀಲರ ಸಂಘದ ಅಧ್ಯಕ್ಷ ವಿವೇಕ್ ಸುಬ್ಬಾರೆಡ್ಡಿ ಸೇರಿದಂತೆ ಹಲವು ಹಿರಿಯ ವಕೀಲರು ಉಪಸ್ಥಿತರಿದ್ದರು.

<><><>

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಚಾಮರಾಜನಗರ ಮತ್ತು ಗುಂಡ್ಲುಪೇಟೆ ಪಟ್ಟಣದ ವಿವಿಧ ವಾರ್ಡ್ ಗಳಿಗೆ ಜಿಲ್ಲಾಧಿಕಾರಿ ರೂಪಾ ಭೇಟಿ ನೀಡಿ, ಎಸ್‌ಐಆರ್ ಪ್ರಕ್ರಿಯೆ ಪರಿಶೀಲನೆ ನಡೆಸಿದರು. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಾಗರಿಕರಿಗೆ ಅರಿವು ಮೂಡಿಸಿದರು. ವಿಜಯನಗರ ಜಿಲ್ಲೆ ಹೊಸಪೇಟೆಯ ವಡಕರಾಯ ದೇವಸ್ಥಾನದಿಂದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕುರಿತಂತೆ ಜಿಲ್ಲಾಡಳಿತ ಜಾಥಾ ಕಾರ್ಯಕ್ರಮ ನಡೆಸಿತು. ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿದರು. ದಾವಣಗೆರೆ ಜಿಲ್ಲೆಯಲ್ಲಿ ‘ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಚುರುಕಿನಿಂದ ಆರಂಭಗೊಂಡಿದ್ದು, ಮೊದಲ ದಿನವೇ ಜಿಲ್ಲಾದ್ಯಂತ ೧ ಲಕ್ಷ ೭ ಸಾವಿರದ ೮೦೨ ಗಣತಿ ನಮೂನೆಗಳನ್ನು ವಿತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ಕೆ ಕೋಲಾರ ಜಿಲ್ಲೆಯಲ್ಲಿ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದ್ದಾರೆ. ಬಿಎಲ್‌ಒಗಳು ಸಾರ್ವಜನಿರೊಂದಿಗೆ ಸೌಜನ್ಯದಿಂದ ವರ್ತಿಸುವ ಮೂಲಕ ಮಾಹಿತಿ ಪಡೆದುಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಆರಂಭಗೊಂಡಿದ್ದು, ಮತದಾರರ ಆಕ್ಷೇಪಣೆಗಳಿದ್ದರೆ ಆಗಸ್ಟ್ ೫ರಿಂದ ಸೆಪ್ಟೆಂಬರ್ ೪ರವರೆಗೆ ನೀಡಬಹುದು ಎಂದು ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ.

<><><>

<u>ಸಂಕ್ಷಿಪ್ತ ಸುದ್ದಿಗಳು</u>

1. ಅಂತಾರಾಷ್ಟ್ರೀಯ ಚಿತ್ರ ಕಲಾವಿದ ಹಾಗೂ ರೈತ ಮತ್ತು ದಲಿತಪರ ಹೋರಾಟಗಾರ ಕೆ.ಟಿ.ಶಿವಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಇಂದು ಹಾಸನದ ಹಾಸನಾಂಬ ಕಲಾಕ್ಷೇತ್ರದ ಆವರಣದಲ್ಲಿ ಸಂಸದ ಶ್ರೇಯಸ್ ಪಟೇಲ್, ಶಾಸಕ ಸ್ವರೂಪ್ ಪ್ರಕಾಶ್, ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಭಾನು ಮುಷ್ತಾಕ್ ಸೇರಿದಂತೆ ಹಲವಾರು ಗಣ್ಯರು ಪಡೆದರು.

2. ಹವಾಮಾನ ಬದಲಾವಣೆಯ ಸವಾಲುಗಳನ್ನು ಎದುರಿಸಲು ಸರ್ಕಾರದ ವಿವಿಧ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ಸಂಶೋಧನಾ ಸಂಸ್ಥೆಗಳು ಹಾಗೂ ಸಾರ್ವಜನಿಕರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ವಾಸಂತಿ ಅಮರ್ ತಿಳಿಸಿದ್ದಾರೆ.

3. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗದ ವತಿಯಿಂದ ಕೊಪ್ಪಳ-ತಳಕಲ್-ಜಿಲ್ಲಾಧಿಕಾರಿಗಳ ಕಛೇರಿ ಮಾರ್ಗದಲ್ಲಿ ಇಂದಿನಿಂದ ನೂತನ ನಗರ ಸಾರಿಗೆ ಆರಂಭಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>